ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 7 ಟಿಟಿಪಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 22.03.2017

ಸುತ್ತೋಲೆ

ವಿಷಯಃ- ನಗರಾಭಿವೃದ್ಧಿ ಪ್ರಾಧಿಕಾರ/ ಯೋಜನಾ ಪ್ರಾಧಿಕಾರ/ ಪುರಸಭೆ ಯೋಜನಾ ಪ್ರಾಧಿಕಾರದಿಂದ ಅಥವಾ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಅನುಮೋದನೆ ಪಡೆಯದೇ ಇರುವ ವಿನ್ಯಾಸಗಳಲ್ಲಿನ ನಿವೇಶನಗಳಿಗೆ ಖಾತೆ ನೀಡುವ ಬಗ್ಗೆ.

ಉಲ್ಲೇಖಃ- 1) ಸರ್ಕಾರದ ಪತ್ರ ಸಂಖ್ಯೆ: ಹೆಚ್‌ಯುಡಿ 395 ಟಿಟಿಪಿ 91, ದಿನಾಂಕ: 07-08-1992.

2) ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂ: DMA/Eng/CR/200/86-87, ದಿನಾಂಕ:18-09-1992.

3) ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 104(2) ಬೆಂರೂಪ್ರಾ 2005, ದಿನಾಂಕ: 09-05-2005.

4) ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 556 ಮೈಅಪ್ರಾ 2013(1), ದಿನಾಂಕ: 28-05-2014.

31/3/17

ಕುಶಾಲನಗರ ಯೋಜನಾ ಪ್ರಾಧಿಕಾರ
ಬಂದ ಪತ್ರ
ಸಂಖ್ಯೆ: 532
ದಿ: 31-3-2017
ಕುಶಾಲನಗರ

*****

ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ನು ವಿಸ್ತರಿಸದೇ ಇರುವ ಪ್ರದೇಶಗಳ ವ್ಯಾಪ್ತಿಯಲ್ಲಿ ವಿನ್ಯಾಸ ಅನುಮೋದನೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಪಡೆಯಲು ಉಲ್ಲೇಖ (1), (2), (3)ರ ಪತ್ರ/ ಸುತ್ತೋಲೆಗಳಲ್ಲಿ ಸರ್ಕಾರದ ನಿರ್ದೇಶನಗಳಿರುತ್ತದೆ. ಆದಾಗ್ಯೂ ಇಂತಹ ಕ್ಷೇತ್ರಗಳಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದನೆ ಪಡೆಯದೇ ಹಲವಾರು ಅನಧಿಕೃತ ಬಡಾವಣೆಗಳು ನಗರ ಪ್ರದೇಶಗಳಲ್ಲಿ ರಚಿತಗೊಂಡು ಇಂತಹ ವಿನ್ಯಾಸಗಳಿಗೆ ಅಗತ್ಯವಿರುವ ಅನುಮೋದನೆಗಳನ್ನು ಪಡೆಯುವ ಪೂರ್ವದಲ್ಲಿಯೇ ನಿವೇಶನಗಳಿಗೆ ಖಾತೆಗಳನ್ನು ನೀಡುವ ಕ್ರಮವು ಸಮಂಜಸವಾಗಿರುವುದಿಲ್ಲ.

ನಗರ ಪ್ರದೇಶಗಳಲ್ಲಿ ಭೂ ಪರಿವರ್ತಿಸಿದ/ ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆ/ರೆವೆನ್ಯೂ ಬಡಾವಣೆಗಳನ್ನು ನಿರ್ಮಾಣ ಮಾಡಿ, ನಿವೇಶನಗಳನ್ನು ನೋಂದಣಿ ಮಾಡಿಕೊಂಡು ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸುವುದರಿಂದಾಗುವ ಪ್ರತಿಕೂಲ ಪರಿಣಾಮಗಳನ್ನು ಗಮನಿಸಲಾಗಿ, ನಗರ ಪ್ರದೇಶಗಳಲ್ಲಿ ಉದ್ಯಾನವನ/ ಬಯಲುಜಾಗೆಗಳ ಕೊರತೆ, ನಾಗರೀಕ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಫಲತೆ, ವ್ಯವಸ್ಥಿತವಾದ ರಸ್ತೆಯ ಪರಿಚಲನೆ, ಮೂಲಭೂತ ಸೌಕರ್ಯದ ಕೊರತೆ ಹಾಗೂ ಯೋಜಿತ ಬೆಳವಣಿಗೆಗಳಲ್ಲಿ ತೊಡಕುಗಳಿರುವುದು ಕಂಡುಬರುತ್ತದೆ. ಇಂತಹ ಬೆಳವಣಿಗೆಗಳಿಗೆ ಅವಕಾಶ ಕಲ್ಪಿಸದೇ, ಅಭಿವೃದ್ಧಿ ಬೆಳವಣಿಗೆಗಳಲ್ಲಿ ಪಾರದರ್ಶಕತೆ, ಸಾರ್ವಜನಿಕ ಹಿತದೃಷ್ಟಿ ಹಾಗೂ ನಾಗರೀಕ ಸ್ನೇಹಿ ಸುಧಾರಣೆಗಳನ್ನು ತರಲು ಸರ್ಕಾರದ ಹಂತದಲ್ಲಿ ಕಾಯ್ದೆಗಳಿಗೆ ತಿದ್ದುಪಡಿ, ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆ.

ಇದಕ್ಕೆ ಪೂರಕವಾಗುವಂತೆ ವಿನ್ಯಾಸಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದೇ ನಿವೇಶನಗಳನ್ನು ರಚಿಸಿ ಪರಭಾರೆ ಮಾಡುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ತಡೆಯುವ ಅವಶ್ಯವಿರುತ್ತದೆ. ಹಾಗೂ ದಿನಾಂಕ:19-10-2013ರ ಮುಂಚಿತವಾಗಿ ಬಂದಿರುವ ಅನಧಿಕೃತ ಬೆಳವಣಿಗೆಗಳನ್ನು ಸಕ್ರಮಗೊಳಿಸುವ ಕುರಿತು ಉಲ್ಲೇಖ (4)ರ ಅಧಿಸೂಚನೆಯಲ್ಲಿ ನಿಯಮಗಳನ್ನು ರಚಿಸಲಾಗಿದ್ದು, ಜಾರಿಗೊಳಿಸಬೇಕಾಗಿರುತ್ತದೆ.

ಹಾಗಾಗಿ, ನಗರ ಸ್ಥಳೀಯ ಸಂಸ್ಥೆಗಳು ಇನ್ನು ಮುಂದೆ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಇಂತಹ ಕ್ರಮ ಕೈಗೊಳ್ಳದೇ ಖಾತೆಗಳನ್ನು ವಿತರಿಸಿದಲ್ಲಿ ಸಂಬಂಧಿಸಿದ ಸ್ಥಳೀಯ ಸಂಸ್ಥೆಯ ಆಯುಕ್ತರು/ ಪೌರಾಯುಕ್ತರು/ ಮುಖ್ಯಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ನಗರಾಭಿವೃದ್ಧಿ ಇಲಾಖೆ

ಇವರಿಗೆ,

1) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
2) ಎಲ್ಲಾ ಜಿಲ್ಲಾಧಿಕಾರಿಗಳು.
3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
4) ಆಯುಕ್ತರು, ಎಲ್ಲಾ ಮಹಾನಗರ ಪಾಲಿಕೆಗಳು.
5) ಆಯುಕ್ತರು, ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6) ಸದಸ್ಯ ಕಾರ್ಯದರ್ಶಿಗಳು, ಎಲ್ಲಾ ಯೋಜನಾ ಪ್ರಾಧಿಕಾರಗಳು.
7) ಎಲ್ಲಾ ಪೌರಾಯುಕ್ತರು/ಮುಖ್ಯಾಧಿಕಾರಿಗಳು, ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿ.
8) ಶಾಖಾ ರಕ್ಷಾ ಕಡತ.